ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೧

**ಪಟ್ಟಿ – ೦೨**

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : ೦೮ನೇ ಡಿಸೆಂಬರ್, ೨೦೨೦

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

---

## ಗಣಿ ಭಾದಿತ ರಸ್ತೆಗಳ ಮತ್ತು ಪ್ರದೇಶಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯ (೧೫೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿ ಭಾದಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿಗೆ ಸರ್ಕಾರ ಯಾವ ಯೋಜನೆ ರೂಪಿಸಿದೆ ;

(ಆ) ಕಳೆದ ಮೂರು ವರ್ಷಗಳಿಂದ ಯಾವ ಯಾವ ಗಣಿ ಭಾದಿತ ರಸ್ತೆಗಳನ್ನು ಮತ್ತು ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಗಣಿ ಭಾದಿತ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಲಾಗಿದೆಯೇ ;

(ಈ) ಬಿಡುಗಡೆ ಮಾಡಿದ್ದಲ್ಲಿ, ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಯಾವ ಯಾವ ರಸ್ತೆಗಳನ್ನು ಅಭಿವೃದ್ಧಿಗೊಳಿಸಲಾಗಿದೆ ? (ತಾಲ್ಲೂಕುವಾರು ಹಂಚಿಕೆ ಮಾಡಲಾದ ಅನುದಾನದ ಮಾಹಿತಿ ಒದಗಿಸುವುದು)

## ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦ (೧೫೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರವು

ಯಾವ ಕ್ರಿಯಾ ಯೋಜನೆ ರೂಪಿಸಿದೆ ; (ತಾಲ್ಲೂಕುವಾರು ವಿವರವಾದ ಮಾಹಿತಿಯನ್ನು ನೀಡುವುದು)

(ಆ) ಸದರಿ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಿಲ್ಲದೆ ದಿನನಿತ್ಯ ರೈತರು ಮತ್ತು ವರ್ತಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಾಗಮಂಗಲ ಎ.ಪಿ.ಎಂ.ಸಿ ಯಲ್ಲಿ ಶೌಚಾಲಯ, ವೇ ಬ್ರಿಡ್ಜ್ ಹಾಗೂ ಇತರೆ ಕಾಮಗಾರಿಗಳು ಕಳಪೆ ಗುಣ ಮಟ್ಟದಿಂದ ಕೂಡಿದ್ದು ಇವುಗಳನ್ನು ರೈತರು ಮತ್ತು ವರ್ತಕರು ಬಳಸದಂತಹ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಮತ್ತು ಇಲಾಖಾ ಮುಖ್ಯಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಅನಧಿಕೃತವಾಗಿ ಗಣಿಗಾರಿಕೆ ತಡೆಗಟ್ಟುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೧ (೧೬೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ಹೊಣಕೆರೆ ಹೋಬಳಿ ಗಂಗಸಮುದ್ರ ಗ್ರಾಮದ ಎಲ್ಲೆ ವ್ಯಾಪ್ತಿಯ ಸರ್ವೆ ನಂ.೧೪೩ರಲ್ಲಿ ೨೦೧೩-೧೪ನೇ ಸಾಲಿನಲ್ಲಿ ೬೫ ಎಕರೆ ಭೂಮಿಯನ್ನು ಸುರಕ್ಷಿತ ಗಣಿ ಕೈಗಾರಿಕಾ ವಲಯದಲ್ಲೆ ಮೀಸಲಿಟ್ಟ ಪ್ರದೇಶ ೪(೧) ಆಗಿರುವಂತಹ ಪ್ರದೇಶದಲ್ಲಿ ಅನಧಿಕೃತವಾಗಿ ಗಣಿಗಾರಿಕೆ

ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕ್ರಷರ್ ಮಾಲೀಕರು ಮತ್ತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; (ವಿವರವಾದ ಮಾಹಿತಿಯನ್ನು ನೀಡುವುದು)

(ಆ) ಗೊಲ್ಲರಹಳ್ಳಿ, ಬಂಕಾಪುರ, ಪಡುವಲ ಪಟ್ಟಣ ಗ್ರಾಮಗಳ ಜನರಿಗೆ ಈ ಅಕ್ರಮ ಗಣಿಗಾರಿಕೆಯಿಂದ ಮನೆಗಳು ಶಿಥಿಲಗೊಂಡಿರುವುದು ಹಾಗೂ ಮುಖ್ಯ ರಸ್ತೆಗಳು ಹದಗೆಟ್ಟಿದ್ದು ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಾರ್ವಜನಿಕರು ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ? (ಗಂಗಸಮುದ್ರ ಎಲ್ಲೆ ಸರ್ವೆ ನಂ.೧೪೩ರ ೬೫ ಎಕರೆ ಭೂ ಸುರಕ್ಷಿತ ವಲಯಕ್ಕೆ ಮೀಸಲಿಟ್ಟಿರುವ ೪(೧) ಪ್ರತಿಯನ್ನು ಒದಗಿಸುವುದು)

## ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಣ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨ (೧೬೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳೆಷ್ಟು ; ಇಂತಹ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಈವರೆಗೆ ದಂಡ ವಿಧಿಸಲಾಗಿದೆ ; (ಪ್ರತಿಗಳನ್ನು ನೀಡುವುದು)

(ಇ) ಅತಿಕ್ರಮಣ ಮಾಡಿರುವ ಪ್ರದೇಶವನ್ನು ಸರ್ಕಾರ ಹಿಂದಕ್ಕೆ ಪಡೆಯಲು ತೆಗೆದುಕೊಂಡ ಕ್ರಮಗಳೇನು ; ತಪ್ಪಿತಸ್ಥ ಇಲಾಖಾಧಿಕಾರಿಗಳು ಮತ್ತು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕೃಷಿ ಮಾರಾಟ ಇಲಾಖೆಯಲ್ಲಿ ಆವರ್ತ ನಿಧಿಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೦೩ (೧೫೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆವರ್ತ ನಿಧಿ ಎಂದರೇನು ; ಕೃಷಿ ಮಾರಾಟ ಇಲಾಖೆಯಲ್ಲಿ ಆವರ್ತ ನಿಧಿ ಹಾಗೂ ಇತರೆ ನಿಧಿಗಳನ್ನು ಸರ್ಕಾರ ಸ್ಥಾಪಿಸಿದೆಯೇ ; ಸ್ಥಾಪಿಸಿದ್ದರೆ, ಯಾವ ಯಾವ ನಿಧಿಗಳನ್ನು ಯಾವ ಯಾವ ಉದ್ದೇಶಗಳಿಗಾಗಿ ಮತ್ತು ಯಾರು ಯಾರಿಗೆ ಸ್ಥಾಪನೆ ಮಾಡಲಾಗಿದೆ ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ನಿಧಿಗಳಿಂದ ಹಣವನ್ನು ಪಡೆದ ಏಜೆನ್ಸಿಗಳು, ಉದ್ಯಮಿಗಳು, ವ್ಯಾಪಾರಗಾರರು, ರೈತರು ಹಾಗೂ ಇತರರು ಯಾರು ಯಾರು ; ಯಾವ ವರ್ಷಗಳಲ್ಲಿ ಎಷ್ಟು ಹಣವನ್ನು ಯಾವ ಉದ್ದೇಶಕ್ಕಾಗಿ ಪಡೆದುಕೊಂಡಿದ್ದಾರೆ ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಸದರಿ ನಿಧಿಗಳಿಂದ ಹಣವನ್ನು ಪಡೆಯಲು ಇರುವ ಮಾರ್ಗಸೂಚಿಗಳೇನು ; ಯಾರು ಯಾರು ಪಡೆಯಬಹುದು ; (ವಿವರವಾದ ಮಾಹಿತಿ ಒದಗಿಸುವುದು)

(ಈ) ಸದರಿ ಆವರ್ತ ಹಾಗೂ ಇತರೆ ನಿಧಿಗಳಲ್ಲಿ ಪಡೆದುಕೊಂಡ ಹಣವನ್ನು ಉದ್ದಿಮೆದಾರರು ಹಾಗೂ ಇತರರು ಸರಿಯಾಗಿ ಪಾವತಿ ಮಾಡಿದ್ದಾರೆಯೇ ; ಮಾಡಿಲ್ಲವಾದರೆ ಬಾಕಿ ಇರುವ ಹಣ ಎಷ್ಟು ; (ವಿವರವಾದ ಮಾಹಿತಿ ಒದಗಿಸುವುದು)

(ಉ) ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮೈಸೂರು ಲ್ಯಾಂಪ್ಸ್ ಉದ್ಯಮದ ಆಸ್ತಿಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೦೪ (೧೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಲ್ಯಾಂಪ್ಸ್ ಉದ್ಯಮವನ್ನು ಯಾವಾಗ ಎಲ್ಲಿ ಪ್ರಾರಂಭಿಸಲಾಯಿತು ; ಈ ಉದ್ಯಮದ ನಷ್ಟಕ್ಕೆ ಕಾರಣಗಳೇನು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಮೈಸೂರು ಲ್ಯಾಂಪ್ಸ್ ಕಂಪನಿಯ ಆಸ್ತಿಗಳು ಯಾವುವು ; ಅವುಗಳು ಎಲ್ಲಿವೆ ; ಅವುಗಳ ಇಂದಿನ ಮೌಲ್ಯವೇನು ; ಇದರ ಮೇಲೆ ಸರ್ಕಾರದ ಹೊಣೆಗಾರಿಕೆ ಎಷ್ಟಿದೆ ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಈ ಕಂಪನಿಯ ಆಸ್ತಿಯನ್ನು ಸರ್ಕಾರ ತನ್ನ ವಶಕ್ಕೆ ನೇರವಾಗಿ ತೆಗೆದುಕೊಂಡಿದೆಯೇ ಅಥವಾ ಇಲ್ಲವೇ ; ಇಲ್ಲದಿದ್ದರೆ ಕಾರಣಗಳೇನು ; (ವಿವರವಾದ ಮಾಹಿತಿ ಒದಗಿಸುವುದು)

(ಈ) ನಗರದ ಹೃದಯ ಭಾಗದಲ್ಲಿರುವ ಕಂಪನಿಯ ಆಸ್ತಿಯನ್ನು ಸರ್ಕಾರವೇ ನೇರವಾಗಿ ತನ್ನ ವಶಕ್ಕೆ ತೆಗೆದುಕೊಂಡು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸರ್ಕಾರಿ ಮೆಡಿಕಲ್ ಕಾಲೇಜು ಮತ್ತು ಇತರೆ ಸಾರ್ವಜನಿಕ ಉಪಯೋಗಕ್ಕೆ ಬಳಸಲು ಇರುವ ತೊಂದರೆಗಳೇನು ? (ವಿವರವಾದ ಮಾಹಿತಿ ಒದಗಿಸುವುದು)

## ಸಾರ್ವಜನಿಕ ಉದ್ಯಮಗಳಲ್ಲಿ ಅನುಕಂಪ ಆಧಾರದ ಹುದ್ದೆಗಳ ನವೀಕರಣದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೦೫ (೧೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು; ಅವು ಯಾವುವು ; ಅವುಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ ; (ಆಡಳಿತ ಇಲಾಖೆವಾರು ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ಸಾರ್ವಜನಿಕ ಉದ್ದಿಮೆಗಳು ದಿನಾಂಕ : ೦೧-೦೪-೨೦೦೧ ರಿಂದ ಇಲ್ಲಿಯವರೆಗೂ ಅಂದರೆ ೨೦ ವರ್ಷಗಳ ಕಾಲ ಅನುಕಂಪ ಆಧಾರಿತ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ನಿರ್ಬಂಧ ವಿಧಿಸಿರುವುದು ಸರಿಯೇ ; ಈ ರೀತಿ ನಿರ್ಬಂಧಗಳನ್ನು ವಿಧಿಸಲು ಕಾರಣಗಳೇನು ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಸದರಿ ದಿನಾಂಕದವರೆಗೆ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ಮೃತ ನೌಕರನ ಹೆಸರು, ಅರ್ಜಿದಾರರ ಹೆಸರು, ವಿಳಾಸ ಹಾಗೂ ಅರ್ಜಿ ಸಲ್ಲಿಸಿದ ದಿನಾಂಕದೊಂದಿಗೆ ನಿಗಮವಾರು ವಿವರವಾದ ಮಾಹಿತಿ ಕೊಡುವುದು)

(ಈ) ಯಾವ ಕಾಲಮಿತಿಯೊಳಗೆ ಈ ನಿರ್ಬಂಧವನ್ನು ಸರ್ಕಾರ ರದ್ದುಗೊಳಿಸಿ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು ;

(ಉ) ಯಾವ ಇಲಾಖೆಗಳಲ್ಲಿಯೂ ಇಲ್ಲದ ನಿರ್ಬಂಧ ಸಾರ್ವಜನಿಕ ಉದ್ದಿಮೆಗಳ ಇಲಾಖೆಯಲ್ಲಿ ಇರುವುದು ನ್ಯಾಯವೇ ?

## ಕೈಗಾರಿಕೆಗಳ ಸ್ಥಾಪನೆ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೦೬ (೧೧೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಳವಡಿಸಿ ಹಂಚಿಕೆ ಮಾಡುವಂತೆ ಕೋರಿದ ಕಂಪನಿಗಳೆಷ್ಟು ಮತ್ತು ಅವು ಯಾವುವು ;

(ಆ) ಕೈಗಾರಿಕಾ ಉದ್ದೇಶಕ್ಕಾಗಿ ಸರ್ಕಾರವು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರ ನಿಗದಿಪಡಿಸಿದ ಮಾನದಂಡ, ನಿಗದಿ, ಹಂಚಿಕೆ ಮತ್ತು ಕ್ರಮಗಳೇನು ;

(ಈ) ಹಂಚಿಕೆ ಪಡೆದ ಕಂಪನಿಗಳು ಕಾರ್ಯಾರಂಭ ಮಾಡಿರುತ್ತವೆಯೇ ; ಮಾಡಿದ್ದಲ್ಲಿ, ಸ್ಥಳೀಯ ಕೆಲಸಗಾರರನ್ನು ನೇಮಿಸಿಕೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ ?

## ರೈತರಿಗೆ ಸಾಲ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೭ (೧೧೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳಾವುವು ; (ಈ ಸಾಲ ಯೋಜನೆಯ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ (ಸಬ್ಸಿಡಿ) ಹೊಂದಿರುವ ಯೋಜನೆಗಳಾವುವು ; (ಈ ಯೋಜನೆಗಳ ರೂಪುರೇಷೆಗಳ ಮಾಹಿತಿ ನೀಡುವುದು)

(ಇ) ಈ ಸಾಲ ಯೋಜನೆಯ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೈತರಿಗಾಗಿ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ ; ವಾಹನ ಸಾಲ ಯೋಜನೆಯಲ್ಲಿ ಸಬ್ಸಿಡಿ ನೀಡಲಾಗುತ್ತಿದೆಯೇ ?

## ಸೂಕ್ತ ಫಲಾನುಭವಿಗಳಿಗೆ ಪಡಿತರ ಒದಗಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೮ (೧೧೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲಾಕ್ ಡೌನ್ ಸಮಯದಲ್ಲಿ ಬಡ ಮತ್ತು ಮಧ್ಯಮ ವರ್ಗದವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ದೊರಕಿದೆಯೇ ;

(ಆ) ಸೂಕ್ತ ಫಲಾನುಭವಿಗಳಿಗೆ ಪಡಿತರವು ಸಿಗದೇ, ದಲ್ಲಾಳಿ ಹಾಗೂ ಪ್ರಭಾವಿಗಳಿಗೆ ಮಾತ್ರ ಹೆಚ್ಚಾಗಿ ಪಡಿತರವು ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಲ್ಲಿ ಏನಾದರೂ ಅವ್ಯವಹಾರ ನಡೆದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಒಂದು ವೇಳೆ ಸೂಕ್ತ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಪಡಿತರವು ದೊರಕಿದ್ದರೆ ಅವರುಗಳ ವಿವರ ನೀಡುವುದು ?

## ಮೂಲ ಸೌಕರ್ಯ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೯ (೧೩೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಪಟ್ಟಣ ಭಾಗಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮಗಳು ಜಾರಿಯಲ್ಲಿವೆಯೇ ;

(ಆ) ಹಾಗಿದ್ದಲ್ಲಿ, ಪಟ್ಟಣ ಭಾಗಗಳಲ್ಲಿ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯ ಪೂರೈಸಲು ಸರ್ಕಾರದ ಕಾಲಮಿತಿ ಏನು ;

(ಇ) ಸದರಿ ಕಾರ್ಯಕ್ರಮವನ್ನು ಪೂರ್ಣಗೊಳಿಸಿ ಮೂಲಭೂತ ಸೌಕರ್ಯಗಳು ದೊರಕಿಸಿಕೊಡುವ ಸಂಬಂಧ ಅಕ್ರಮ ಮತ್ತು ದುಂದು ವೆಚ್ಚಕ್ಕೆ ಕಡಿವಾಣ ಹಾಕುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಾರ್ಮಿಕರಿಗೆ ಸರಿಯಾಗಿ ವೇತನ ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೧೦ (೧೨೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; ಬಡತನ ರೇಖೆಗಿಂತ ಕೆಳಗಿರುವಂತಹ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾರ್ಮಿಕರಿಗೆ ತಿಂಗಳಿಗೆ ಸರಿಯಾಗಿ ವೇತನವು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಕಾರ್ಮಿಕರಿಗೆ ಜೀವನ ಸಾಗಿಸುವುದು ಕಷ್ಟವಾಗುವುದಿಲ್ಲವೇ; ಈ ಬಗ್ಗೆ ಅಧಿಕಾರಿಗಳಿಗೆ ಸರ್ಕಾರ ನೀಡಿದ ನಿರ್ದೇಶನಗಳೇನು ;

(ಇ) ಕಾರ್ಮಿಕರಿಗೆ ಸರಿಯಾದ ಸಮಯಕ್ಕೆ ವೇತನ ದೊರಕಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧ (೧೨೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಷ್ಟು ದಿವಸಗಳ ಕಾಲ ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ವರ್ಷದಲ್ಲಿ ಎಷ್ಟು ಬಾರಿ ಫಲಪುಷ್ಪ ಪ್ರದರ್ಶನಗಳನ್ನು ನಡೆಸಲಾಗುತ್ತದೆ ;

(ಆ) ಲಕ್ಷಾಂತರ ಮಂದಿ ಈ ಪ್ರದರ್ಶನ ವೀಕ್ಷಿಸಲು ಆಗಮಿಸುತ್ತಿರುವುದರಿಂದ ಪ್ರದರ್ಶನದ ಅವಧಿಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳಲ್ಲಿದೆಯೇ ;

(ಇ) ಫಲಪುಷ್ಪ ಪ್ರದರ್ಶನದಲ್ಲಿ ಭಾಗವಹಿಸುವ ಉತ್ತಮ ಸಂಸ್ಥೆಗಳಿಗೆ ಬಹುಮಾನ ನೀಡಲು ಅನುಸರಿಸುವ ಮಾನದಂಡ ಏನು; ಇದಕ್ಕೆ ತಜ್ಞರ ಸಮಿತಿ ಇದೆಯೇ ?

## ಹಾಸನ ಜಿಲ್ಲೆಯಲ್ಲಿರುವ ಗಣಿ ನಿಕ್ಷೇಪಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨ (೧೨೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಯಾವ ಯಾವ ರೀತಿಯ ಗಣಿ ನಿಕ್ಷೇಪಗಳನ್ನು ಗುರುತಿಸಲಾಗಿದೆ; ಇದರಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಜಾಗವೆಷ್ಟು ; ಖಾಸಗಿ ಜಮೀನುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳು

ಯಾವುವು ಮತ್ತು ಅವುಗಳ ವಿಸ್ತೀರ್ಣವೆಷ್ಟು ; (ಆದೇಶ ಸಹಿತ ವಿವರ ನೀಡುವುದು)

(ಇ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳನ್ನು ಯಾರಿಗೆ ಗುತ್ತಿಗೆ ನೀಡಲಾಗಿದೆ ಮತ್ತು ಎಷ್ಟು ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡಲಾಗಿದೆ; ಸರ್ಕಾರ ಮತ್ತು ಗುತ್ತಿಗೆದಾರರ ನಡುವೆ ಆಗಿರುವ ಒಡಂಬಡಿಕೆಗಳೇನು ; (ಆದೇಶ ಸಹಿತ ವಿವರ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಗಣಿಗಾರಿಕೆ ನಡೆಸುತ್ತಿರುವ ಪ್ರಕರಣಗಳು ಕಂಡುಬಂದಿವೆಯೇ ; (ಪ್ರಕರಣವಾರು ಮಾಹಿತಿ ನೀಡುವುದು)

(ಉ) ಕಳೆದ ೫ ವರ್ಷಗಳಲ್ಲಿ ಸಾಮಾಜಿಕ ಹೊಣೆಗಾರಿಕೆ ಯೋಜನೆಯಡಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಕಾಮಗಾರಿಗಳಿಗೆ ಬಳಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕೆ.ಐ.ಎ.ಡಿ.ಬಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩ (೧೨೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಕಳೆದ ೩ ವರ್ಷಗಳಲ್ಲಿ ಕೈಗೊಂಡಿರುವ ವಿದ್ಯುತ್ ಮತ್ತು ಸಿವಿಲ್ ಕಾಮಗಾರಿಗಳಾವುವು ; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು; ಈ ಕಾಮಗಾರಿಗಳನ್ನು

ಪಡೆದಿರುವ ಗುತ್ತಿಗೆದಾರರು ಯಾರ್‍ಯಾರು ; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವುದಾಗಿ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಪ್ರಕರಣವಾರು ಮಾಹಿತಿ ನೀಡುವುದು)

## ನಗರ ಯೋಜನಾ ಪ್ರಾಧಿಕಾರಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪ (೧೨೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ನಗರ ಯೋಜನೆ ಪ್ರಾಧಿಕಾರಗಳು ಯಾವುವು ; ಅವುಗಳ ಕಾರ್ಯವ್ಯಾಪ್ತಿಯೇನು ; (ಸಂಪೂರ್ಣ ವಿವರ ನೀಡುವುದು)

(ಆ) ಈ ನಗರ ಯೋಜನೆ ಪ್ರಾಧಿಕಾರಗಳಿಂದ ಯಾವ ಯಾವ ಪ್ರದೇಶಗಳಲ್ಲಿ ವಸತಿ ಬಡಾವಣೆಗಳನ್ನು ನಿರ್ಮಾಣ ಮಾಡಲಾಗಿದೆ; ಈ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ ; ಇವುಗಳ ವಿಸ್ತೀರ್ಣವೆಷ್ಟು; ಈ ಬಡಾವಣೆಗಳನ್ನು ಯಾವಾಗ ನಿರ್ಮಾಣ ಮಾಡಲಾಗಿದೆ ; (ಬಡಾವಣೆವಾರು ವಿವರ ನೀಡುವುದು)

(ಇ) ಈ ಪ್ರಾಧಿಕಾರಗಳು ಬಡಾವಣೆಗಳ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ

ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಈ ಕಾಮಗಾರಿಗಳಿಗೆ ಆದ ವೆಚ್ಚವೆಷ್ಟು ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರ ವಿವರಗಳನ್ನು ಒಡಾವಣೆವಾರು ನೀಡುವುದು ?

## ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೫ (೧೨೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಿಸೆಂಬರ್–೨೦೧೯ ರಿಂದ ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದರಿಂದ ತೆಂಗು ಬೆಳೆಗಾರರಿಗೆ ಆಗುತ್ತಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ತೆಂಗು ಬೆಳೆಗಾರರಿಗೆ ಸರ್ಕಾರವು ಪರಿಹಾರ ಘೋಷಿಸಿದೆಯೇ ; ಘೋಷಿಸಿದ್ದಲ್ಲಿ, ಕ್ವಿಂಟಾಲ್‌ಗೆ ಎಷ್ಟು ಪರಿಹಾರ ಘೋಷಿಸಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ತೆಂಗು ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಅಥವಾ ಬೆಂಬಲ ಬೆಲೆ ಘೋಷಿಸಲು ಮತ್ತು ನಾಫೆಡ್ ಮೂಲಕ ಕೊಬ್ಬರಿ ಖರೀದಿ ಕೇಂದ್ರಗಳನ್ನು ತೆರೆಯುವ ಬಗ್ಗೆ ಸರ್ಕಾರದ ನಿಲುವೇನು ?

## ಸಾರ್ವಜನಿಕ ಉದ್ದಿಮೆಗಳ ಲಾಭ ನಷ್ಟದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೬ (೨೧೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಯಾವುವು ; (ಆಡಳಿತ ಇಲಾಖಾವಾರು ಮಾಹಿತಿ ನೀಡುವುದು)

(ಆ) ಸಾರ್ವಜನಿಕ ಉದ್ದಿಮೆಗಳ ಇಲಾಖೆಯ ವ್ಯಾಖ್ಯೆಯಡಿಯಲ್ಲಿ ಬರುವ ಲಾಭ, ನಷ್ಟ ಹಾಗೂ ಕ್ರೂಢೀಕೃತ ನಷ್ಟ ಅಂದರೆ ಏನು ? (ವಿವರ ನೀಡುವುದು)

(ಇ) ೨೦೦೧ ರಿಂದ ೨೦೨೦ ರವರೆಗೆ ಸಾರ್ವಜನಿಕ ಉದ್ದಿಮೆಗಳು ಗಳಿಸಿದ ಲಾಭ, ನಷ್ಟ ಹಾಗೂ ಕ್ರೂಢೀಕೃತ ನಷ್ಟ ಎಷ್ಟು; (ಉದ್ದಿಮೆವಾರು, ವರ್ಷವಾರು, ಮಾಹಿತಿ ನೀಡುವುದು)

(ಈ) ೨೦೦೧ ರಿಂದ ೨೦೨೦ರವರೆಗೆ ತನ್ನ ಕ್ರೂಢೀಕೃತ ನಷ್ಟ ಶೇಕಡ ೩೦ಕ್ಕಿಂತ ಹೆಚ್ಚಿಗೆ ಲಾಭ ಗಳಿಸಿದ ಸಾರ್ವಜನಿಕ ಉದ್ದಿಮೆಗಳಾವುವು? (ಉದ್ದಿಮೆಗಳ ಹೆಸರು, ಲಾಭ ಗಳಿಸಿದ ವರ್ಷ ಇತ್ಯಾದಿಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

## ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೭ (೨೧೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಿವೇಶನ ನೀಡುವ ಸಂಬಂಧ ನೋಂದಣಿಯಾಗಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಘಗಳಿಗೆ ಸರ್ಕಾರವು ಜಮೀನನ್ನು ಮಂಜೂರು ಮಾಡಲು ಇರುವ ಮಾರ್ಗದರ್ಶಿ ನಿಯಮಗಳು ಯಾವುವು; ಸದರಿ ಸಂಘಗಳು ಸದಸ್ಯರಿಗೆ ನಿವೇಶಗಳನ್ನು ನೀಡುವ ಸಂಬಂಧ ಎಷ್ಟು ಜಮೀನನ್ನು ಸರ್ಕಾರದಿಂದ ಪಡೆದುಕೊಂಡಿವೆ; (ಜಿಲ್ಲಾವಾರು, ವರ್ಷಾವಾರು, ಮಾಹಿತಿ ನೀಡುವುದು)

(ಇ) ಸದರಿ ಸಂಘಗಳಲ್ಲಿ ಅಕ್ರಮ ಮತ್ತು ವೈಪರಿತ್ಯಗಳು ನಡೆದಿರುವ ಸಂಖ್ಯೆ ಎಷ್ಟು ; (ಸಂಘವಾರು ಮಾಹಿತಿ ನೀಡುವುದು)

(ಈ) ಸದಸ್ಯರಿಗೆ ನಿವೇಶನ ನೀಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿನ ರೇಷ್ಮೆ ಕೃಷಿಯ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮ (೧೧೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದ ಒಟ್ಟು ರೇಷ್ಮೆ ಉತ್ಪಾದನೆಯಲ್ಲಿ ರಾಜ್ಯದ ಪಾಲು ಶೇ.೪೬ರಷ್ಟಿದ್ದು, ಇದನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಯೋಜನೆ ಇದೆಯೇ ;

(ಆ) ಉತ್ತರ ಕರ್ನಾಟಕ ಭಾಗದಲ್ಲಿ ಬಹಳಷ್ಟು ರೈತರು ರೇಷ್ಮೆ ಕೃಷಿಯನ್ನು ಜೀವನೋಪಾಯವನ್ನಾಗಿ ಮಾಡಿಕೊಂಡು ಜೀವನಸಾಗಿಸುತ್ತಿದ್ದು, ಬೆಳೆದ ಫಸಲಿನ ಮಾರುಕಟ್ಟೆಗಾಗಿ ದೂರದ ರಾಮನಗರಕ್ಕೆ ಬರಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ರೇಷ್ಮೆ ಹುಳು ಸಂರಕ್ಷಣಾ ಘಟಕಗಳು ಎಲ್ಲೆಲ್ಲಿ ಇವೆ; ಇಂತಹ ಘಟಕಗಳನ್ನು ಉತ್ತರ ಕರ್ನಾಟಕ ಭಾಗದಲ್ಲಿ ಸ್ಥಾಪಿಸಲು ಸರ್ಕಾರಕ್ಕಿರುವ ಸಮಸ್ಯೆಗಳೇನು ;

(ಈ) ಉತ್ತರ ಕರ್ನಾಟಕದಲ್ಲಿ ರೇಷ್ಮೆ ಕೃಷಿಗೆ ಪೂರಕವಾದ ವಾತಾವರಣವಿದ್ದು, ಅದನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಹೊಸ ಯೋಜನೆಗಳನ್ನು ಹಮ್ಮಿಕೊಂಡಿದೆ ?

## ರಾಜ್ಯದಲ್ಲಿರುವ ಅಮೂಲ್ಯವಾದ ಖನಿಜ ನಿಕ್ಷೇಪಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೯ (೧೨೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಪಾರ ಪ್ರಮಾಣದ ಅಮೂಲ್ಯವಾದ ಖನಿಜ ನಿಕ್ಷೇಪಗಳಿದ್ದು, ಅವುಗಳನ್ನು ಗುರುತಿಸಲು ಗಣಿ ಮತ್ತು ಭೂವಿಜ್ಞಾನ ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಸದರಿ ನಿಕ್ಷೇಪಗಳನ್ನು ಗುರುತಿಸಿ ನಿಯಮಾನುಸಾರ ವಿಲೇವಾರಿ ಮಾಡುವುದರಿಂದ ಸರ್ಕಾರದ ಬೊಕ್ಕಸಕ್ಕೆ ಅಪಾರ ರಾಜಸ್ವ ಬರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕೋಲಾರದ ಚಿನ್ನದ ಗಣಿಯನ್ನು ಪುನರುಜ್ಜೀವನಗೊಳಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಯಾವಾಗ ಮತ್ತು ಯಾವ ಹಂತದಲ್ಲಿ ಪುನರಾರಂಭಗೊಳಿಸಲಾಗುವುದು ?

## ರೇಷ್ಮೆ ಬೆಳೆಗಾರರ ನೆರವಿಗೆ ರೂಪಿಸಿರುವ ಯೋಜನೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೦ (೧೩೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಬೆಳೆಗಾರರ ನೆರವಿಗೆ ಸರ್ಕಾರ ರೂಪಿಸಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಆ) ರೇಷ್ಮೆ ಗೂಡಿನ ಬೆಲೆ ಮಾರುಕಟ್ಟೆಯಲ್ಲಿ ಕುಸಿತಗೊಂಡಾಗ ರೇಷ್ಮೆ ಬೆಳಗಾರರಿಗೆ ಯಾವ ಪ್ರಮಾಣದಲ್ಲಿ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ ;

(ಇ) ಪ್ರಸ್ತುತ ಹಾಲಿ ನೀಡಲಾಗುತ್ತಿರುವ ಪ್ರೋತ್ಸಾಹ ಧನವನ್ನು ಪರಿಷ್ಕರಿಸಲಾಗುವುದೇ ;

(ಈ) ಹಾಗಾದಲ್ಲಿ, ಯಾವ ಪ್ರಮಾಣದಲ್ಲಿ ಯಾವ ಕಾಲಮಿತಿಯಲ್ಲಿ ಪರಿಷ್ಕರಿಸಲಾಗುವುದು ?

## ಮೈಸೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಿಸುವ ನಿವೇಶನಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೧ (೧೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಅಭಿವೃದ್ಧಿಪಡಿಸಿರುವ ನಿವೇಶಗಳನ್ನು ಹಂಚಿಕೆ ಮಾಡುವಲ್ಲಿ ಅನುಸರಿಸುವ ಮಾನದಂಡಗಳೇನು ;

(ಆ) ಸದರಿ ಮಾನದಂಡಗಳ ಪ್ರಕಾರ ಇದುವರೆವಿಗೂ ಹಂಚಿಕೆಯಾಗಿ, ಉದ್ದೇಶಗಳನ್ನು ಪೂರೈಸದಿರುವ ನಿವೇಶನಗಳ ಸಂಖ್ಯೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಇ) ಹಂಚಿಕೆಯಾಗದೆ ಬಾಕಿ ಉಳಿದಿರುವ ನಿವೇಶಗಳ ಸಂಖ್ಯೆ ಎಷ್ಟು ? (ವರ್ಗವಾರು ವಿವರ ನೀಡುವುದು)

## ರೇಷ್ಮೆ ಬೇಸಾಯದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೨ (೧೩೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ರೇಷ್ಮೆ ಬೇಸಾಯ ಮಾಡಲಾಗುತ್ತಿದೆ ;

(ಆ) ರೇಷ್ಮೆ ಬೇಸಾಯಗಾರರಿಗೆ ರೇಷ್ಮೆ ಮನೆ ಕಟ್ಟಿಕೊಳ್ಳಲು ಸಾಲದ ಯೋಜನೆಯನ್ನು ರೂಪಿಸಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ಯೋಜನೆಯ ರೂಪುರೇಷೆಗಳೇನು ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಸದರಿ ಸಾಲ ಯೋಜನೆಯಲ್ಲಿನ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಹಾಲು ಉತ್ಪಾದಕರಿಗೆ ನೀಡಲಾಗುತ್ತಿರುವ ಸಹಾಯಧನದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೩ (೧೩೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಲು ಉತ್ಪಾದಕರಿಗೆ ಸರ್ಕಾರ ಪ್ರತಿ ಲೀಟರ್‌ಗೆ ನೀಡುತ್ತಿರುವ ಸಹಾಯಧನ ಎಷ್ಟು ;

(ಆ) ಸಹಾಯಧನ ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು ;

(ಇ) ಯಾವ ಕಾಲಮಿತಿಯಲ್ಲಿ ಬಾಕಿ ಸಹಾಯಧನ ಬಿಡುಗಡೆಗೊಳಿಸಲಾಗುವುದು ;

(ಈ) ಹಾಲು ಉತ್ಪಾದಕರ ಒಕ್ಕೂಟಗಳು ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ರೂ.೨.೦೦/-ಗಳು ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ರೀತಿ ಕಡಿಮೆ ಮಾಡಿರುವುದರಿಂದ ಹಾಲು ಉತ್ಪಾದಕರು ಹೆಚ್ಚಿನ ಆರ್ಥಿಕ ತೊಂದರೆಗೊಳಗಾಗಿದ್ದು, ಕಡಿಮೆ ಮಾಡಿರುವ ಮೊತ್ತವನ್ನು ಸರ್ಕಾರವೇ ಹಾಲು ಉತ್ಪಾದಕರಿಗೆ ನೀಡಲು ಸಾಧ್ಯವೇ ?

## ರಾಜ್ಯದಲ್ಲಿ ಅಡುಗೆ ಎಣ್ಣೆಗೆ ಕಲಬೆರಕೆ ಮಾಡಿ ಕಡಿಮೆ ಬೆಲೆಗೆ ಮಾರುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೪ (೧೪೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಡುಗೆ ಎಣ್ಣೆಗೆ ಕಲಬೆರಕೆ ಮಾಡಿ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳಿಗೆ ಅರ್ಜಿಯನ್ನು ಸಲ್ಲಿಸಲಾಗಿದೆ; ಆನ್‌ಲೈನ್‌ನಲ್ಲಿ ಅರ್ಜಿಗಳನ್ನು

ಸಲ್ಲಿಸುವಾಗ ಎಲ್ಲಾ ದಾಖಲೆಗಳನ್ನು ನೀಡಿದ್ದರೂ ಸಹ, ಕಾರ್ಡ್‌ಗಳು ಲಭ್ಯವಾಗದಿರುವುದಕ್ಕೆ ಕಾರಣಗಳೇನು ;

(ಇ) ಪಡಿತರ ಚೀಟಿ ನೀಡಲು ಖಾಸಗಿ ಏಜೆನ್ಸಿಗಳಿಗೆ ಪರವಾನಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ, ವಿವರ ನೀಡುವುದು ;

(ಈ) ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ಖಾಸಗಿ ಸಂಸ್ಥೆಗಳು/ವ್ಯಕ್ತಿಗಳು ಪಡಿತರ ಚೀಟಿ ಕೊಡಿಸುವುದಾಗಿ ಸಾರ್ವಜನಿಕರಿಂದ ಹಣ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ಸುತ್ತ ಮುತ್ತ ನಗರದಲ್ಲಿ ಅನಧಿಕೃತವಾಗಿ ತಲೆ ಎತ್ತಿರುವ ಗಣಿಗಾರಿಕೆ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೫ (೧೪೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿಯ ಸುತ್ತಮುತ್ತ ಅನಧಿಕೃತವಾಗಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಅನಧಿಕೃತ ಕಲ್ಲು ಗಣಿಗಾರಿಕೆಯಿಂದ ಪರಿಸರ ಮಾಲಿನ್ಯವಾಗಿ ಸ್ಥಳೀಯ ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಅನಾರೋಗ್ಯಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿಯ ಗಣಿಗಾರಿಕೆಯಿಂದ ಅಧಿಕ ಭಾರದ ವಾಹನಗಳ ಓಡಾಟದಿಂದ ಸಾರ್ವಜನಿಕ ರಸ್ತೆಗಳು ಹಾಳಾಗಿದ್ದು, ರಸ್ತೆಗಳು ದುರಸ್ಥಿಯಾಗದೆ ಸಾರ್ವಜನಿಕರು ವಾಹನದಲ್ಲಿ ಹೋಗುವಾಗ ಆಯತಪ್ಪಿ ಬಿದ್ದು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸದಿರಲು ಕಾರಣಗಳೇನು; ಅನಧಿಕೃತ ಕಲ್ಲು ಗಣಿಗಾರಿಕೆಯನ್ನು ನಡೆಸುವಲ್ಲಿ ಅಧಿಕಾರಿ/ನೌಕರರು ಶಾಮೀಲಾಗಿರುವುದು ನಿಜವೇ ?

## ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಯೋಜನೆಗಳ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬ (೧೪೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಯೋಜನೆಗಳಾವುವು ; ಕಳೆದ ೦೨ ವರ್ಷಗಳಲ್ಲಿ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಜಲಪ್ರಳಯದಲ್ಲಿ ಎಷ್ಟು ಎಕರೆ ಪ್ರದೇಶದ ಬೆಳೆ ನಷ್ಟವಾಗಿದೆ; ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; ಜಲ ಪ್ರಳಯದ ಸಂಬಂಧ ಭೂ ಕುಸಿತಗೊಂಡ ಪ್ರದೇಶದಲ್ಲಿ ಮತ್ತೆ ತೋಟಗಾರಿಕೆ ಕೈಗೊಳ್ಳಲು ಸರ್ಕಾರ ಯಾವ ಯಾವ ಯೋಜನೆಯನ್ನು ರೂಪಿಸಿದೆ ; (ಪೂರ್ಣ ವಿವರ ನೀಡುವುದು)

(ಇ) ಜಲಪ್ರಳಯದಲ್ಲಿ ಉಂಟಾದ ನಷ್ಟವೆಷ್ಟು ; ಸರ್ಕಾರ ಬಿಡುಗಡೆಗೊಳಿಸಿದ ಮೊತ್ತವೆಷ್ಟು; ಉಳಿಕೆ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು ? (ಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯತೆಗೊಳಪಟ್ಟ ಉದ್ಯಮಗಳ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೭ (೧೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯತೆಗೆ ಒಳಪಟ್ಟ ಕಾರ್ಖಾನೆಗಳು, ಉದ್ಯಮಗಳು ಯಾವುವು ; (ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಲಾಭದಲ್ಲಿರುವ ಮತ್ತು ನಷ್ಟದಲ್ಲಿರುವ ಉದ್ಯಮಗಳು ಯಾವುವು ; ನಷ್ಟದಲ್ಲಿರುವ ಉದ್ಯಮಗಳಿಗೆ ಸರ್ಕಾರವು ಮಾಡುತ್ತಿರುವ ಮಾಸಿಕ ಖರ್ಚು ಎಷ್ಟು ; (ಸಂಬಳ, ಸಾರಿಗೆ ಮುಂತಾದ ಖರ್ಚುಗಳ ಉದ್ಯಮವಾರು ವಿವರ ನೀಡುವುದು)

(ಇ) ನಷ್ಟದಲ್ಲಿರುವ ಉದ್ಯಮಗಳ ಸ್ಥಿರ ಮತ್ತು ಚರ ಆಸ್ತಿಗಳ ವಿವರ ನೀಡುವುದು ; (ಉದ್ಯಮವಾರು ವಿವರ ನೀಡುವುದು)

(ಈ) ನಿರಂತರವಾಗಿ ನಷ್ಟ ಹೊಂದುತ್ತಿರುವ ಇಂತಹ ಉದ್ಯಮಗಳನ್ನು ಖಾಸಗಿಯವರಿಗೆ ಮಾರಾಟ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ?

## ವಿಜಯಪುರ ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೮ (೧೦೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬಹುದಾದಂತಹ ಮಹತ್ವದ ಯೋಜನೆಯಾದ ಸಣ್ಣ ಕೈಗಾರಿಕಾ ವಸಾಹತು ಂಯೋಜನೆಗೆ ಚಾಲನೆ ನೀಡಲಾಗಿದೆಯೇ ;

(ಆ) ನೀಡಿದ್ದಲ್ಲಿ, ಯಾವ ಭಾಗದಲ್ಲಿ ಎಷ್ಟು ಎಕರೆ ಭೂ ಪ್ರದೇಶವನ್ನು ಈ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆ ; (ವಿವರ ನೀಡುವುದು)

(ಇ) ಈ ಯೋಜನೆ ವಿಳಂಬಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಗಣಿ ಪ್ರದೇಶಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೯ (೧೧೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳ ಹೊರತಾಗಿ ಹೊಸ ಗಣಿ ಪ್ರದೇಶಗಳ ಸಂಶೋಧನೆ ಹುಡುಕಾಟಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಸ್ತುತ ಸರ್ಕಾರದ ವತಿಯಿಂದ ನಡೆಯುತ್ತಿರುವ ಗಣಿ ಪ್ರದೇಶಗಳಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಗಣಿಗಳಿಂದ ಬಂದ ಆದಾಯವೆಷ್ಟು ? (ವಿವರ ನೀಡುವುದು)

## ಸಾಬೂನು ಹಾಗೂ ಮಾರ್ಜಕ ನಿಗಮ ನಿಯಮಿತಗಳು ಉತ್ಪಾದಿಸುತ್ತಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೩೦ (೧೯೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಾಬೂನು ಹಾಗೂ ಮಾರ್ಜಕ ನಿಗಮ ನಿಯಮಿತದಲ್ಲಿ ಉತ್ಪಾದಿಸುತ್ತಿರುವ ಉತ್ಪನ್ನಗಳು ಯಾವುವು ; (ವಿವರ ನೀಡುವುದು)

(ಆ) ಈ ಉತ್ಪನ್ನಗಳ ಮಾರುಕಟ್ಟೆಗೆ ಸಂಸ್ಥೆ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಸರ್ಕಾರದ ಅಧೀನದಲ್ಲಿರುವ ಪಡಿತರ ಅಂಗಡಿ, ಕೆಎಂಎಫ್ ಮಳಿಗೆ, ಹಾಪ್‌ಕಾಮ್ಸ್, ಸರ್ಕಾರಿ ಪಡಿತರ ಅಂಗಡಿ ಹಾಗೂ ಇತರೆ ಸ್ಥಳಗಳ ಉತ್ಪನ್ನಗಳಲ್ಲಿ ಈ ಉತ್ಪನ್ನಗಳ ಮಾರಾಟಕ್ಕೆ ಅವಕಾಶ ನೀಡಲು ಸಾಧ್ಯವಿಲ್ಲವೇ ; ಅವಕಾಶ ಕಲ್ಪಿಸಿದಲ್ಲಿ ಈ ಉತ್ಪನ್ನಗಳ ಮಾರಾಟಕ್ಕೆ ಅನುಕೂಲವಾಗುವುದಿಲ್ಲವೇ ?

## ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧ (೧೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳೇನು ; ಒಂದು ನ್ಯಾಯಬೆಲೆ ಅಂಗಡಿಗೆ ನಿಗದಿಪಡಿಸಿರುವ ಕನಿಷ್ಠ ಹಾಗೂ ಗರಿಷ್ಠ ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಆ) ಒಂದು ನ್ಯಾಯಬೆಲೆ ಅಂಗಡಿಯಲ್ಲಿ ಸಾವಿರ ಕಾರ್ಡ್‌ಗಿಂತ ಹೆಚ್ಚಿದ್ದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಪ್ರಾರಂಭಿಸಲು ಸರ್ಕಾರದ ಉದ್ದೇಶವಿದೆಯೇ ; ಹಾಗಿದ್ದಲ್ಲಿ, ಶಿವಮೊಗ್ಗ ನಗರದಲ್ಲಿ ಹೊಸ ನ್ಯಾಯಬೆಲೆ ಅಂಗಡಿಗಳ್ನನು ಪ್ರಾರಂಭಿಸಲು ಸರ್ಕಾರ ಯೋಚಿಸಿದೆಯೇ ;

(ಇ) ಸರ್ಕಾರದ ಒಂದು ದೇಶ ಒಂದು ಕಾರ್ಡ್ ಹೊಸ ಯೋಜನೆಯಂತೆ ಶಿವಮೊಗ್ಗ ನಗರದ ನ್ಯಾಯಬೆಲೆ ಅಂಗಡಿಯವರು ತಮಗೆ ವಿತರಿಸಿರುವ ಪಡಿತರ ಪದಾರ್ಥಗಳನ್ನು ಸ್ಥಳೀಯರಿಗೆ ವಿತರಿಸದೇ ಇರುವುದರಿಂದ ಸ್ಥಳೀಯ ಕಾರ್ಡ್‌ದಾರರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಅಡಿಕೆ ಪವಿತ್ರ ಎನ್ನುವ ಭಾವನೆ ಜನತೆಯಲ್ಲಿದ್ದರು, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ವರದಿ ಕೈಬಿಡುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨ (೧೫೦) ಮಾನ್ಯ ಪೌರಾಡಳಿ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ;

(ಆ) ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಳ್ಳಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ?

## ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸರಿಯಾದ ಸಮಯಕ್ಕೆ ತಲುಪಿಸದೆ ಇರುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩ (೧೩೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಸೂಕ್ತ ಫಲಾನುಭವಿಗಳಿಗೆ ಪಡಿತರವು ಸಿಗದೇ ದಲ್ಲಾಳಿಗಳ ಪಾಲಾಗುತ್ತಿರುವುದನ್ನು ತಡೆಯಲು ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಅತ್ಯಂತ ಕಡುಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಸಾಲದೆ ಅವರ ದೈನಂದಿನ ಜೀವನ ನಿರ್ವಹಣೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್ ಪಡಿತರ ಚೀಟಿಯ ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುವ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪ (೧೩೬) ಮಾನ್ಯ ಪೌರಾಡಳಿ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುವ "ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ" ಯೋಜನೆಯಡಿ ವರ್ಷದ ಮಧ್ಯದಲ್ಲಿ ಹಲವು ಬಾರಿ ಮಾರ್ಗಸೂಚಿ ಬದಲಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾರ್ಗಸೂಚಿ ಬದಲಾವಣೆ ಮಾಡಿರುವುದರಿಂದ ರೈತರಿಗೆ ಸಹಾಯಧನ ಪಡೆಯಲು ಕಷ್ಟವಾಗುತ್ತಿದ್ದು, ಈ ಮಾರ್ಗಸೂಚಿ ಬದಲಾವಣೆ ಪದೇ ಪದೇ ಮಾಡಲು ಕಾರಣಗಳೇನು ;

(ಇ) ತೋಟಗಾರಿಕೆ ಯಾಂತ್ರೀಕರಣ ಯೋಜನೆಯಡಿ ಸರ್ಕಾರದ ವತಿಯಿಂದ ಬರುವ ಅನುದಾನವೆಷ್ಟು ; ಹಲವು ವರ್ಷಗಳಿಂದ ಸದರಿ ಯೋಜನೆಗೆ ಅನುದಾನ ಬಾರದಿರುವುದರಿಂದ ಯೋಜನೆ ಕುಂಠಿತಗೊಳ್ಳುತ್ತಿದ್ದು ರೈತರಿಗೆ ಸಹಾಯಧನ ದೊರಕುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅನುದಾನವನ್ನು ವರ್ಷಕ್ಕೆ ಸರಿಯಾಗಿ ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸದರಿ ಯೋಜನೆಯನ್ನು ಜಾರಿಗೆ ತರಲು ಹಲವಾರು ಲೋಪದೋಷಗಳಿದ್ದು ಅವುಗಳನ್ನು ಸರಿಪಡಿಸಲು ರೈತರಿಗೆ ಸಹಾಯಧನ ದೊರಕಿಸುವಲ್ಲಿ ಸರ್ಕಾರ ತೆಗೆದುಕೊಂಡ ಕಟ್ಟುನಿಟ್ಟಿನ ಕ್ರಮಗಳೇನು ?

## ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದದವರು) :-**

೧೩೫ (೧೪೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿ ಎಷ್ಟು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳು ಅಸ್ತಿತ್ವದಲ್ಲಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ೫ ವರ್ಷಗಳಲ್ಲಿ ೧೦೦% ತೆರಿಗೆ ವಸೂಲಾತಿ ಮಾಡಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳು ಯಾವುವು ; (ವಿವರ ಒದಗಿಸುವುದು)

(ಇ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಶೇಕಡ ನೂರರಷ್ಟು ತೆರಿಗೆ ವಸೂಲು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಕೈಗಾರಿಕಾ ನಿವೇಶನಗಳ ಶುದ್ಧಕ್ರಯ ಪತ್ರ ನೆರವೇರಿಸಲು ನಿಗಧಿಪಡಿಸಿದ ಅಂತಿಮ ಬೆಲೆ ಕಡಿಮೆ ಮಾಡುವ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೩೬ (೧೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆ, ನರಸಾಪುರ ಕೈಗಾರಿಕೆ ಪ್ರದೇಶದಲ್ಲಿ ಒಂದು ವರ್ಷದ ಹಿಂದೆ ಹಂಚಿಕೆಯಾಗಿ "ಲೀಸ್ ಕಮ್ ಸೇಲ್ ಡೀಡ್" ಮಾಡುವಾಗ ೧ ಎಕರೆಗೆ ರೂ.೧೦ ಲಕ್ಷದಂತೆ ನಿಗದಿಪಡಿಸಿದ್ದು, ಅಕ್ಟೋಬರ್ ತಿಂಗಳಲ್ಲಿ ೬ ರಿಂದ ೧೦ ಪಟ್ಟು ಅಂತಿಮ ದರವನ್ನು ಹೆಚ್ಚಿಸಿ ಸಂಬಂಧಪಟ್ಟವರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ನೋಟಿಸ್ ಜಾರಿ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ, ಅವರು ಹೆಚ್ಚಿಗೆ ಮಾಡಿರುವ ದರವನ್ನು ಕಡಿಮೆ ಮಾಡಿ ಉದ್ಯೋಗ ಸ್ಥಾಪನೆಗೆ ಅನುಕೂಲ ಮಾಡಿಕೊಡಲು ಮನವಿ ಸಲ್ಲಿಸಿದ್ದು ನಿಜವೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ?

## ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಪೌರ ಕಾಮಿಕರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೩೭ (೧೧೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಸಭೆ, ಪುರ ಸಭೆ, ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಖಾಯಂ ನೌಕರರ ಸಂಖ್ಯೆ ಎಷ್ಟು; ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು ;

(ಇ) ಗುತ್ತಿಗೆ ಹಾಗೂ ಹೊರ ಗುತ್ತಿಗೆ ನೌಕರರಿಗೆ ನೀಡುತ್ತಿರುವ ವೇತನ ಎಷ್ಟು ;

(ಈ) ಸಮಾನ ಕೆಲಸಕ್ಕೆ ಸಮಾನ ವೇತನ ಪಾವತಿಸಲಾಗುತ್ತಿದೆಯೇ; ಇಲ್ಲವಾದಲ್ಲಿ, ಕಾರಣವೇನು ;

(ಉ) ಗುತ್ತಿಗೆ, ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಡ್ಯ ನಗರದಲ್ಲಿನ ತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೩೮ (೧೧೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್‌ಗಳಲ್ಲಿ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತ್ಯಾಜ್ಯ ವಿಲೇವಾರಿ ನಿರ್ವಹಣೆಗಾಗಿ ಅನುಮೋದನೆಗೊಂಡ ಹುದ್ದೆಗಳೆಷ್ಟು ; ಅವುಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು;

(ಇ) ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಒಣ ತ್ಯಾಜ್ಯ ಹಾಗೂ ದ್ರವ ತ್ಯಾಜ್ಯಗಳನ್ನು ವಿಂಗಡಿಸಿ ವೈಜ್ಞಾನಿಕವಾಗಿ ತ್ಯಾಜ್ಯ ವಿಲೇವಾರಿಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ನಂದಿ ಗಿರಿಧಾಮ ವಲಯದಲ್ಲಿ ಗಣಿಗಾರಿಕೆ ನಿಷೇಧ ಕುರಿತು

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯ (೧೬೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಂದಿ ಗಿರಿಧಾಮ ವಲಯದಲ್ಲಿ ಗಣಿಗಾರಿಕೆಯಲ್ಲಿ ತೊಡಗಿರುವ ಸಂಸ್ಥೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಅವೈಜ್ಞಾನಿಕ ಗಣಿಗಾರಿಕೆಯಿಂದ ಉಂಟಾಗುವ ಪರಿಸರ ಮಾಲಿನ್ಯ ಹಾಗೂ ಶಬ್ಧ ಮಾಲಿನ್ಯದಿಂದ ವನ ಸಂಪತ್ತು ಹಾಗೂ ವನ್ಯಜೀವಿ ಸಂಪತ್ತು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅತಿಭಾರದ ಲಾರಿಗಳ ಸಂಚಾರದಿಂದ ಹಾಳಾಗುತ್ತಿರುವ ರಸ್ತೆಗಳ ಪುನರ್ ನಿರ್ಮಾಣ, ದುರಸ್ಥಿಕಾರ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು;ಅದಕ್ಕೆ ಮೀಸಲಿಟ್ಟ ಹಣವೆಷ್ಟು ;

(ಈ) ಅತ್ಯಮೂಲ್ಯ ಹಾಗೂ ಅಪರೂಪದ ಪಂಚಗಿರಿ (ನಂದಿಗಿರಿ) ವಲಯದಲ್ಲಿ ಸಂಪೂರ್ಣವಾಗಿ ಗಣಿಗಾರಿಕೆ ನಿಷೇಧಿಸುವ ಯೋಜನೆಯನ್ನು ಸರ್ಕಾರವು ಹೊಂದಿದೆಯೇ ?

## ಬಯಲು ಸೀಮೆಯ ಹೊಸ ಪ್ರದೇಶಗಳಲ್ಲಿ ತೋಟಗಾರಿಕಾ ವಿಸ್ತರಣೆ ಕುರಿತು

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೦ (೧೬೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳ ರೈತರು ಯಾವ ಯಾವ ರೀತಿಯ ಬೆಳೆಗಳಿಗೆ ತೋಟಗಾರಿಕೆ ಬೆಳೆಗಳ ಕೃಷಿಯ ಮೇಲೆ ಅವಲಂಬಿತರಾಗಿದ್ದಾರೆ ;

(ಆ) ತೋಟಗಾರಿಕೆಯಿಂದ ಎಷ್ಟು ಪ್ರಮಾಣದ ಆರ್ಥಿಕ ಸ್ವಾವಲಂಬನೆ ಸಾಧಿಸಲಾಗಿದೆ ;

(ಇ) ಈ ರೈತ ಸಮುದಾಯಕ್ಕೆ ಯಾವ ಯಾವ ರೀತಿಯ ಸಾಲ ಸೌಲಭ್ಯಗಳನ್ನು, ರಿಯಾಯಿತಿಗಳನ್ನು ಒದಗಿಸಲಾಗುತ್ತಿದೆ; ಮಹಿಳಾ ರೈತರಿಗೆ ಆದ್ಯತೆ ನೀಡಲಾಗಿದೆಯೇ ;

(ಈ) ಬಯಲು ಸೀಮೆಯ ಯಾವ ಯಾವ ಜಿಲ್ಲೆಗಳಲ್ಲಿ ತೋಟಗಾರಿಕೆಯು ಪರಿಣಾಮಕಾರಿ ಜೀವನೋಪಾಯವಾಗಿದೆ ; ಎಷ್ಟು ಹೊಸ ಪ್ರದೇಶದಲ್ಲಿ ತೋಟಗಾರಿಕೆಯನ್ನು ರೈತರು ವಿಸ್ತರಿಸಿದ್ದಾರೆ ? (ವಿವರವಾದ ಮಾಹಿತಿ ನೀಡುವುದು)

## BPL ಮತ್ತು APL ಪಡಿತರ ಕಾರ್ಡುದಾರರಿಗೆ ಸಮರ್ಪಕ ಆಹಾರ ಪೂರೈಕೆ ಕುರಿತು

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೧ (೧೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ BPL ಮತ್ತು APL ಕಾರ್ಡುದಾರರಿಗೆ ಸಕಾಲಕ್ಕೆ ಸರಿಯಾದ ಪ್ರಮಾಣದ ಆಹಾರ ಪಡಿತರ ಸರಬರಾಜು ಆಗುತ್ತಿದೆಯೇ ;

(ಆ) Covid-19 Lockdown ಹಿನ್ನೆಲೆಯಲ್ಲಿ ನಿರುದ್ಯೋಗಿಗಳಾದವರಿಂದ BPL/ APL ಕಾರ್ಡುಗಳಿಗೆ ಬೇಡಿಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಬಂದಿವೆ ;

(ಇ) ರಾಜ್ಯದಲ್ಲಿ ಪ್ರವಾಹ /ಅತಿವೃಷ್ಠಿಯಿಂದಾಗಿ ಆಹಾರ ಸರಬರಾಜಿನಲ್ಲಿ ಕೊರತೆ ಉಂಟಾಗಿದೆಯೇ ; ಉಂಟಾಗಿದ್ದಲ್ಲಿ, ಪರ್ಯಾಯವಾಗಿ ಆಹಾರ ಪೂರೈಸಲು ವಹಿಸಿರುವ ಕ್ರಮಗಳೇನು ?

## "ಬೆಲೆ ಸ್ಥಿರೀಕರಣ ಯೋಜನೆ" ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೪೨ (೧೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕವು ಕೃಷಿ ಉತ್ಪನ್ನಗಳ ವಿಕೇಂದ್ರೀಕೃತ ಖರೀದಿ/ಸಂಗ್ರಹಣೆ ರಾಜ್ಯ ಎಂಬುದು ನಿಜವೇ ರಾಜ್ಯ ಸರ್ಕಾರ ತನ್ನ ಏಜೆನ್ಸಿಗಳ

ಮೂಲಕ ಭಾರತ ಸರ್ಕಾರದ ಪರವಾಗಿ ಭತ್ತ/ಒರಟಾದ ಧಾನ್ಯಗಳನ್ನು ಸಂಗ್ರಹಿಸುತ್ತಿದೆಯೇ; ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ಖರೀದಿ ಏಜೆನ್ಸಿಗಳ ವಿವರಗಳನ್ನು ನೀಡುವುದು ;

(ಆ) ರಾಜ್ಯ ಸರ್ಕಾರ ಖಾರಿಫ್ ಅವಧಿಯಲ್ಲಿ ಕೃಷಿ ಉತ್ಪನ್ನಗಳನ್ನು ಖರೀದಿಸಲು ಹೊಂದಿರುವ ಗುರಿ ಮತ್ತು ಖರೀದಿ ಕೇಂದ್ರ ಸೇರಿದಂತೆ ಹಮ್ಮಿಕೊಂಡಿರುವ ವ್ಯವಸ್ಥೆ ಮತ್ತು ಯೋಜನೆಗಳ ವಿವರ ನೀಡುವುದು;

(ಇ) ಖಾರಿಫ್ ಬೆಳೆ ಕೊಯ್ಲು ಈಗಾಗಲೇ ಪ್ರಾರಂಭವಾಗಿರುವುದರಿಂದ ಕೃಷಿ ಉತ್ಪನ್ನ ಖರೀದಿ ಕೇಂದ್ರಗಳನ್ನು ತೆರೆಯುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯವು ದೇಶದ ಪ್ರಮುಖ ದ್ವಿದಳ ಧಾನ್ಯ ಬೆಳೆಯುವ ರಾಜ್ಯಗಳಲ್ಲಿ ಒಂದಾಗಿದ್ದು 'ಕಲಬುರಗಿ ತೊಗರಿಬೇಳೆ (ಕೆಂಪುಗ್ರಾಂ)' ಯು ಜಾಗತಿಕ ಮಟ್ಟದಲ್ಲಿ ಅತ್ಯುತ್ತಮ ಗುಣಮಟ್ಟದಿಂದ ಕೂಡಿದೆಯೆಂದು ಪ್ರಖ್ಯಾತವಾಗಿದ್ದು, ಇತ್ತೀಚೆಗೆ ಸರ್ಕಾರದಿಂದ ಭೌಗೋಳಿಕ ಸೂಚಕ (ಜಿಐ) ಟ್ಯಾಗ್ ಅನ್ನು ಸ್ವೀಕರಿಸಿದ್ದು, ಗ್ರೀನ್ ಗ್ರಾಂ, ಬೆಂಗಾಲ್ ಗ್ರಾಂ, ಬ್ಲ್ಯಾಕ್ ಗ್ರಾಂ ಮತ್ತು ತುರ್ ದಾಲ್ ಮುಂತಾದ ದ್ವಿದಳ ಧಾನ್ಯಗಳನ್ನು ರಬಿ ಮತ್ತು ಖಾರಿಫ್ ಅವಧಿಯಲ್ಲಿ ಸಂಗ್ರಹಿಸುವ ಏಜೆನ್ಸಿಗಳು ಯಾವುವು ;

(ಉ) ಇತ್ತೀಚೆಗೆ "ಬೆಲೆ ಸ್ಥಿರೀಕರಣ ನಿಧಿ ಯೋಜನೆ" ಯಡಿ ಭಾರತೀಯ ಆಹಾರ ನಿಗಮ ವತಿಯಿಂದ ಇತರೆ ರಾಜ್ಯಗಳಂತೆ ದ್ವಿದಳ ಧಾನ್ಯಗಳ ಸಂಗ್ರಹವನ್ನು ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

## ತೋಟಗಾರಿಕಾ ಬೆಳೆಗಳ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೪೩ (೧೫೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕಾ ಬೆಳೆ ಕೃಷಿಯಲ್ಲಿರುವ ಒಟ್ಟು ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಮತ್ತು ಬೆಳೆವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಕೋವಿಡ್–೧೯ ಸಾಂಕ್ರಾಮಿಕ ರೋಗ ಹರಡುವಿಕೆ ಸಮಯದಲ್ಲಿ ಕೊಯ್ಲು ಮೊದಲಿಗೆ ಮತ್ತು ಕೊಯ್ಲು ಸಂದರ್ಭದಲ್ಲಿ ನಾಶವಾದ ತೋಟಗಾರಿಕಾ ಬೆಳೆಯ ವಿಸ್ತೀರ್ಣವೆಷ್ಟು;

(ಇ) ಕೋವಿಡ್–೧೯ ಪರಿಹಾರ ಪ್ಯಾಕೇಜ್ ಅಡಿಯಲ್ಲಿ ತೋಟಗಾರಿಕಾ ಬೆಳೆಗಾರರಿಗೆ ವಿವಿಧ ಬೆಳೆಗಳ ಬಾಬ್ತು ಒದಗಿಸಲಾದ ಪರಿಹಾರದ ಮೊತ್ತ ಎಷ್ಟು; (ಮಾಹಿತಿ ನೀಡುವುದು)

(ಈ) ಟೊಮ್ಯಾಟೊ, ಈರುಳ್ಳಿ ಮತ್ತು ಆಲೂಗೆಡ್ಡೆ ಈ ಮೂರು ಮೂಲ ತರಕಾರಿಗಳು ಪದೇ ಪದೇ ಬೆಲೆಯ ಏರುಪೇರಿಗೆ ತುತ್ತಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು ಹಾಗೂ ಇದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು ;

(ಉ) ರೈತರಿಗೆ ಸಂಭಾವನೆ ಹಾಗೂ ಗ್ರಾಹಕರಿಗೆ ಕೈಗೆಟುಕುವ ಬೆಲೆಯನ್ನು ಖಾತರಿಪಡಿಸುವ ಉಭಯ ಉದ್ದೇಶಗಳನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ ?

## ರಾಜ್ಯದಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೪೪ (೧೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಈವರೆವಿಗೂ ಸರ್ಕಾರ ಕಲ್ಲು ಗಣಿಗಾರಿಕೆ ನಡೆಸಲು ಎಷ್ಟು ಸಂಸ್ಥೆಗಳಿಗೆ ಅನುಮತಿ ನೀಡಿದೆ; ಆ ಪೈಕಿ ಎಷ್ಟು ಕ್ರಷರ್ (ಜಲ್ಲಿ) ಕಲ್ಲು ಗಣಿಗಾರಿಕೆ ಕಂಪನಿಗಳು ಕಾರ್ಯ ನಿರ್ವಹಿಸುತ್ತಿವೆ;

(ಆ) ಅವುಗಳ ಪೈಕಿ ಸ್ವಂತ ಜಮೀನಿನಲ್ಲಿ ಮತ್ತು ಸರ್ಕಾರಿ ಜಮೀನಿನಲ್ಲಿ ಗಣಿಗಾರಿಕೆ ನಡೆಸುತ್ತಿರುವ ಸಂಸ್ಥೆಗಳಾವುವು; (ವಿವರ ನೀಡುವುದು)

(ಇ) ಈ ಕಲ್ಲು ಗಣಿಗಾರಿಕೆಯಿಂದ ಸರ್ಕಾರಕ್ಕೆ ಪ್ರತಿ ವರ್ಷ ಸಂದಾಯವಾಗುತ್ತಿರುವ ರಾಜಧನವೆಷ್ಟು? (ಜಿಲ್ಲಾವಾರು ಮತ್ತು ಸಂಸ್ಥೆವಾರು ಮಾಹಿತಿ ನೀಡುವುದು)

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ನೋಂದಣಿ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೪೫ (೧೫೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನೋಂದಣಿಯಾದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಆ ಮೂಲಕ ಹೂಡಲಾದ ಬಂಡವಾಳದ ಪ್ರಮಾಣ ಎಷ್ಟು;

(ಆ) ಸದರಿ ಕೈಗಾರಿಕೆಗಳು ಸೃಷ್ಟಿಸಿದ ಉದ್ಯೋಗವಕಾಶಗಳು, ಗುರಿ ಮತ್ತು ಸಾಧನೆಗಳೇನು;

(ಇ) ತುಮಕೂರು ಜಿಲ್ಲೆಯೂ ಸೇರಿದಂತೆ ಯಾವ ಯಾವ ಜಿಲ್ಲೆಗಳಲ್ಲಿ ಸದರಿ ಕೈಗಾರಿಕೆಗಳು ಸ್ಥಾಪಿಸಲ್ಪಟ್ಟಿವೆ;

(ಈ) ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಎಂದು ಗುರುತಿಸಲ್ಪಟ್ಟ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ನೋಂದಣಿ ಮಾಡಿಕೊಳ್ಳುವಲ್ಲಿ ಸರ್ಕಾರದ ಹೆಚ್ಚಿನ ಪ್ರೋತ್ಸಾಹದಾಯಕ ಕ್ರಮಗಳೇನು ?

## ಕೊಡಗು ಜಿಲ್ಲೆಯಲ್ಲಿ ಕಿತ್ತಳೆ ಹಾಗೂ ಏಲಕ್ಕಿ ತೋಟಗಳಿಗೆ ಆಗಿರುವ ಹಾನಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬ (೧೪೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕೊಡಗು ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಕಿತ್ತಳೆ, ಏಲಕ್ಕಿ ತೋಟಗಳಿಗೆ ಸಾಕಷ್ಟು ಹಾನಿಯಾಗಿರುವುದರಿಂದ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ವಿಸ್ತೀರ್ಣದ ಕಿತ್ತಳೆ, ಏಲಕ್ಕಿ ತೋಟ ಹಾನಿಗೊಳಗಾಗಿದೆ; ಹಾಗೂ ಸದರಿ ನಷ್ಟದ ಅಂದಾಜಿನ ವಿವರಗಳೇನು;

(ಇ) ಕಳೆದ ೩ ವರ್ಷಗಳಲ್ಲಿ ಕಿತ್ತಳೆ, ಏಲಕ್ಕಿ ಬೆಳೆಗಾರರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರ, ನೆರವು ಹಾಗೂ ಸೌಲಭ್ಯಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಕಿತ್ತಳೆ, ಏಲಕ್ಕಿ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ಯುಜಿಡಿ ಕಾಮಗಾರಿ ಅನುಷ್ಠಾನ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೭ (೧೩೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆಯ ವ್ಯಾಪ್ತಿಯಲ್ಲಿ ಯುಜಿಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ;

(ಆ) ಸದರಿ ಕಾಮಗಾರಿಯು ಇದುವರೆಗೂ ಪೂರ್ಣಗೊಳ್ಳದಿರಲು ಕಾರಣಗಳೇನು;

(ಇ) ಸದರಿ ಕಾಮಗಾರಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾಗಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಸಹಕಾರ ಸಂಸ್ಥೆಗಳು ವಿತರಿಸಿರುವ ಸಾಲ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೮ (೧೩೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈಗಾಗಲೇ ಸಹಕಾರ ಸಂಸ್ಥೆಗಳಿಂದ ಸಾಲ ಮತ್ತು ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

(ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಫಲಾನುಭವಿಗಳಿಗೆ ಸಾಲ ಪಡೆಯಲು ನಿಗದಿಪಡಿಸಿರುವ ಮಾನದಂಡ, ನಿಯಮ ಹಾಗೂ ಷರತ್ತುಗಳೇನು; (ಆದೇಶ ಪ್ರತಿ ಒದಗಿಸುವುದು)

(ಇ) ಇದುವರೆಗೂ, ಜಿಲ್ಲೆಯಲ್ಲಿ ಪ್ರತಿ ಸಹಕಾರ ಸಂಸ್ಥೆಯ ಮೂಲಕ ವಿತರಣೆಯಾಗಿರುವ ಸಾಲ ಮತ್ತು ಸೌಲಭ್ಯಗಳ ವಿವರಗಳೇನು;

(ಈ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಇದುವರೆಗೂ ಎಷ್ಟು ರೈತರಿಗೆ ಸಾಲದ ಹಣವನ್ನು ವಿತರಣೆ ಮಾಡಲಾಗಿದೆ ?

## ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆ ವ್ಯಾಪ್ತಿಯಲ್ಲಿ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆ ದುರಸ್ತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೯ (೧೪೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆ ವ್ಯಾಪ್ತಿಯ ಹಲವಾರು ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳು ಇದುವರೆವಿಗೂ ದುರಸ್ಥಿಯಾಗದಿರಲು ಕಾರಣವೇನು;

(ಇ) ಮಡಿಕೇರಿ ನಗರ ಸಭೆಗೆ ಕಳೆದ ೩ ವರ್ಷಗಳಿಂದ ರಸ್ತೆ, ಚರಂಡಿ ತಡೆಗೋಡೆ ಹಾಗೂ ಸೇತುವೆಗಳ ನಿರ್ಮಾಣ ಹಾಗೂ ದುರಸ್ಥಿಗಾಗಿ ವಿವಿಧ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಸದರಿ ಅನುದಾನದಲ್ಲಿ ಕಳೆದ ೩ ವರ್ಷಗಳಿಂದ ಕೈಗೊಂಡಿರುವ ವಿವಿಧ ಕಾಮಗಾರಿಗಳಾವುವು ? (ವಿವರ ಹಾಗೂ ಪ್ರತಿ ಕಾಮಗಾರಿಗೆ ಖರ್ಚಾಗಿರುವ ಅನುದಾನದ ಸಂಪೂರ್ಣ ಮಾಹಿತಿ ಒದಗಿಸುವುದು)

## ಕಲಬುರಗಿ ಜಿಲ್ಲೆಯ ಚಿತ್ತಾಪುರ ಕೈಗಾರಿಕಾ ಅಭಿವೃದ್ಧಿಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦ (೯೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನ ಆಯವ್ಯಯದಲ್ಲಿ ಕಲಬುರಗಿ ಜಿಲ್ಲೆಯ ಚಿತ್ತಾಪುರದ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗುವುದೆಂದು ಘೋಷಿಸಲಾಗಿದ್ದು, ಇದುವರೆವಿಗೂ ಅಭಿವೃದ್ಧಿಪಡಿಸಲಾದ ವಿವರಗಳನ್ನು ವಿವರ ನೀಡುವುದು;

(ಆ) ಕೈಗಾರಿಕಾ ಪ್ರದೇಶದ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಸರ್ಕಾರಿ ತೋಟಗಾರಿಕೆ ಅಭಿವೃದ್ದಿ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೧ (೯೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸರ್ಕಾರಿ ತೋಟಗಾರಿಕೆ ಅಭಿವೃದ್ಧಿಪಡಿಸಲು ನೀಡಿದ ಅನುದಾನವೆಷ್ಟು; (ವಿವರ ನೀಡುವುದು)

(ಆ) ಎಷ್ಟು ಸರ್ಕಾರಿ ತೋಟಗಾರಿಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹೊಸ ಸರ್ಕಾರಿ ತೋಟಗಾರಿಕೆಗಳನ್ನು ನಿರ್ಮಿಸಲು ಸರ್ಕಾರ ಚಿಂತಿಸಿದೆಯೇ; ಚಿಂತಿಸಿದ್ದಲ್ಲಿ, ಎಲ್ಲಿ ಮತ್ತು ಯಾವ ಜಾಗ ಗುರುತಿಸಿದೆ? (ವಿವರ ನೀಡುವುದು)

## ಬಹುಮಹಡಿ ಕಟ್ಟಡಗಳ ಸೊಸೈಟಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೨ (೧೮೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಹುಮಹಡಿ ಕಟ್ಟಡಗಳ ಸೊಸೈಟಿಗಳನ್ನು ಸಹಕಾರ ಕಾಯ್ದೆಯ ಅನ್ವಯ ನೋಂದಣಿ ಮಾಡಲಾಗುತ್ತಿದೆಯೇ;

(ಆ) ಬೆಂಗಳೂರು ನಗರದಲ್ಲಿ ಬಹುಮಹಡಿ ಕಟ್ಟಡಗಳ ಎಷ್ಟು ಸೊಸೈಟಿಗಳು ನೋಂದಣಿಯಾಗಿವೆ; (ವಿಭಾಗವಾರು ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಈ ಬಹುಮಹಡಿ ಕಟ್ಟಡಗಳ ಸೊಸೈಟಿಗಳನ್ನು ಆಡಿಟ್ ಮಾಡಲಾಗುತ್ತಿದೆಯೇ; ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರದ ಎಷ್ಟು ಸೊಸೈಟಿಗಳು ಆಡಿಟ್ ಲೆಕ್ಕವನ್ನು ಇಲಾಖೆಗೆ ಒಪ್ಪಿಸಿವೆ ? (ವಿಭಾಗವಾರು ವಿವರ ನೀಡುವುದು)

## ಎಂ ಸ್ಯಾಂಡ್ ಘಟಕಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೩ (೧೮೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಂ ಸ್ಯಾಂಡ್ ಘಟಕಗಳು ಎಷ್ಟು; ಈ ಘಟಕಗಳಿಂದ ವರ್ಷಕ್ಕೆ ಎಷ್ಟು ಟನ್ ಎಂ ಸ್ಯಾಂಡ್ ಉತ್ಪಾದನೆಯಾಗುತ್ತದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಘಟಕಗಳಲ್ಲಿ ಉತ್ಪಾದನೆಯಾಗುವ ಒಂದು ಟನ್ ಎಂ ಸ್ಯಾಂಡ್‌ಗೆ ಸರ್ಕಾರವು ಎಷ್ಟು ಮೊತ್ತವನ್ನು ನಿಗದಿ ಮಾಡಿದೆ;

(ಇ) ಸರ್ಕಾರವು ವಿದೇಶದಿಂದ ಎಷ್ಟು ಟನ್ ಎಂ ಸ್ಯಾಂಡ್ ಆಮದು ಮಾಡಿಕೊಂಡಿದೆ; ಇದಕ್ಕೆ ಎಷ್ಟು ಮೊತ್ತವನ್ನು ಪಾವತಿಸಲಾಗಿದೆ; ವಿದೇಶದಿಂದ ಆಮದಾದ ಎಂ ಸ್ಯಾಂಡ್ ಗೆ ಟನ್ ಒಂದಕ್ಕೆ ಸರ್ಕಾರ ನಿಗಧಿಪಡಿಸಿದ ಮೊತ್ತವೆಷ್ಟು;

(ಈ) ಸರ್ಕಾರವು ಕಳೆದ ೩ ವರ್ಷಗಳಲ್ಲಿ ಎಷ್ಟು ಪ್ರಮಾಣದ ಮರಳನ್ನು ವಿದೇಶಗಳಿಂದ ಆಮದು ಮಾಡಿಕೊಂಡಿದೆ; ಅದರಲ್ಲಿ ಗ್ರಾಹಕರಿಗೆ ಮಾರಾಟ ಮಾಡಲಾದ ಮರಳಿನ ಪ್ರಮಾಣವೆಷ್ಟು; ಈ ಮರಳನ್ನು ಎಲ್ಲಿ ಸಂಗ್ರಹಿಸಲಾಗಿದೆ?

## ನಗರ ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೪ (೧೮೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ನಿಗಮದಿಂದ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ನಿಗಮಕ್ಕೆ ಸರ್ಕಾರದಿಂದ ದೊರೆತ ಅನುದಾನವೆಷ್ಟು; ಸದರಿ ಮೊತ್ತವನ್ನು ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ವೆಚ್ಚ ಮಾಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ತೋಟಗಾರಿಕೆ ಬೆಳೆಗಳಿಗೆ ನೀಡಿರುವ ಸೌಲಭ್ಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೧೫೫ (೧೮೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊರೋನ ಸಂಕ್ರಮಣ ಕಾಲದಲ್ಲಿ ತೋಟಗಾರಿಕೆ ಮತ್ತು ರೇಷ್ಮೆ ಬೆಳೆಗಾರರಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡಿದೆ;

(ಆ) ರಾಜ್ಯದಲ್ಲಿ ಕಳೆದ ೬ ತಿಂಗಳಿನಲ್ಲಿ ಬೆಳೆದ ತೋಟಗಾರಿಕಾ ಬೆಳೆಗಳಿಗೆ ಸಮರ್ಪಕವಾದ ಮಾರುಕಟ್ಟೆ ಒದಗಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಅನ್ನಭಾಗ್ಯ ಯೋಜನೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):-**

೧೫೬ (೧೮೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನ್ನಭಾಗ್ಯ ಯೋಜನೆಯಡಿಯಲ್ಲಿ ಕಳೆದ ೬ ತಿಂಗಳಿನಲ್ಲಿ ಬಿಪಿಎಲ್, ಎಪಿಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡುಗಳಿವೆ; ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣವೆಷ್ಟು; ರಾಜ್ಯದಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತಿದೆ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಯ ಮಾಲೀಕರು ಬಡವರಿಗೆ ವಿತರಿಸದೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ವಂಚಿಸುತ್ತಿರುವ ನ್ಯಾಯಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಕಳೆದ ೬ ತಿಂಗಳಿನಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಈ) ಸರ್ಕಾರವು ಕಳೆದ ೬ ತಿಂಗಳಿನಲ್ಲಿ ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಎಷ್ಟು ವೆಚ್ಚ ಮಾಡಿದೆ ? (ತಿಂಗಳುವಾರು ವಿವರ ನೀಡುವುದು)

## ಮೈಸೂರು ನಗರದ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ತ್ಯಾಜ್ಯದ ರಾಶಿ ಕುರಿತು

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-**

೧೫೭ (೧೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಅಲ್ಲಲ್ಲಿ ತ್ಯಾಜ್ಯದ ರಾಶಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ನಗರದ ಸಾರ್ವಜನಿಕರ ಆರೋಗ್ಯಕ್ಕೆ, ಸೌಂದರ್ಯಕ್ಕೆ ಹಾನಿ ಉಂಟಾಗಿ, ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೂಡಲೇ ಈ ತ್ಯಾಜ್ಯದ ರಾಶಿಯನ್ನು ತೆಗೆದು ಸ್ವಚ್ಛಗೊಳಿಸಿ ಪರಿಸರ ನೈರ್ಮಲ್ಯಕ್ಕೆ, ನಗರದ ಅಂದಕ್ಕೆ ಗಮನ ಕೊಡಲಾಗುವುದೇ; ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಿ ತ್ಯಾಜ್ಯವನ್ನು ಸುರಿಯುವವರನ್ನು ಪತ್ತೆ ಹಚ್ಚಿ, ಅವರಿಗೆ ದಂಡ ವಿಧಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಶ್ರೀರಂಗಪಟ್ಟಣದ ಪಶ್ಚಿಮವಾಹಿನಿ ಕ್ಷೇತ್ರದಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವ ಬಗ್ಗೆ

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೧೫೮ (೧೯೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀರಂಗಪಟ್ಟಣದ ಪಶ್ಚಿಮವಾಹಿನಿ ಕ್ಷೇತ್ರಕ್ಕೆ ಪ್ರತಿದಿನ ನೂರಾರು ಜನರು ಪುಣ್ಯ ಕಾರ್ಯ ಮತ್ತು ಅಪರ ಕರ್ಮಾಂತರಗಳನ್ನು ನಡೆಸಲು ಬರುತ್ತಿದ್ದು, ಕ್ಷೇತ್ರ, ನದಿ ದಂಡೆ, ನದಿ ಇವುಗಳಲ್ಲಿ ಸ್ವಚ್ಛತೆ ಇಲ್ಲದೆ, ತ್ಯಾಜ್ಯಗಳ ರಾಶಿ ಬಿದ್ದಿದ್ದು, ಅನೈರ್ಮಲ್ಯಕರ,

ಅಶುಚಿಕರ ವಾತಾವರಣ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕ್ಷೇತ್ರಕ್ಕೆ ಕರ್ಮಾಂತರಗಳನ್ನು ನಡೆಸಲು ಬರುವವರಿಗೆ ಶುಲ್ಕ ವಿಧಿಸಲಾಗುತ್ತಿದೆಯೇ; ಎಷ್ಟು ಶುಲ್ಕ ವಿಧಿಸಲಾಗುತ್ತಿದೆ; ಇದರಿಂದ ಪುರಸಭೆಗೆ ಬರುತ್ತಿರುವ ಆದಾಯ ಎಷ್ಟು;

(ಇ) ಈ ಕ್ಷೇತ್ರದ ಸ್ವಚ್ಛತೆ ಮತ್ತು ಅಭಿವೃದ್ಧಿಗೆ ಪುರಸಭೆಯವರು ಸೂಕ್ತ ಕ್ರಮ ತೆಗೆದುಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ, ನೈರ್ಮಲ್ಯವನ್ನು ಕಾಪಾಡಲು ಕ್ರಮ ತೆಗೆದುಕೊಳ್ಳುವರೆ; ಈ ಕ್ಷೇತ್ರಕ್ಕೆ ಹೆಚ್ಚುವರಿಯಾಗಿ ಸ್ವಚ್ಛತಾ ಸಿಬ್ಬಂದಿಯನ್ನು ನೇಮಿಸಿಕೊಂಡು ಸ್ವಚ್ಛತೆ ಕಾಪಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ನಂಜನಗೂಡು ಬಜಾರ್ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಹಳೆಯ ಮಾರುಕಟ್ಟೆಯ ಕಳಪೆ ಕಾಮಗಾರಿ ಬಗ್ಗೆ

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೧೫೯ (೧೯೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಂಜನಗೂಡು ಬಜಾರ್ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ತರಕಾರಿ, ದಿನಸಿ, ಮಾಂಸ ಹಾಗೂ ಮೀನು ಮಾರುಕಟ್ಟೆಯಲ್ಲಿ ನಿರ್ಮಿಸಿರುವ ಮಳಿಗೆಗಳ ಸಂಖ್ಯೆ ಎಷ್ಟು; ಮಾರುಕಟ್ಟೆ ಕಾಮಗಾರಿಯು ಅವೈಜ್ಞಾನಿಕವಾಗಿದ್ದು, ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನೆಲ ಅಂತಸ್ತಿನಲ್ಲಿ ನೀರು ಹರಿದು ಹೋಗಲು ಅವಕಾಶ ಇಲ್ಲದೇ ನೀರು ನಿಲ್ಲುವುದು, ಗ್ರಾಹಕರ ಓಡಾಟಕ್ಕೆ ಸೂಕ್ತ ಸ್ಥಳಾವಕಾಶ ಬಿಡದಿರುವುದು, ಗೋಡೆಗಳು ಬಿರುಕು ಬಿಟ್ಟಿರುವುದು, ಕೇವಲ ಎರಡು ಪ್ರವೇಶ ದ್ವಾರಗಳ ನಿರ್ಮಾಣ ಮುಂತಾದ ಅವ್ಯವಸ್ಥೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನೂತನವಾಗಿ ನಿರ್ಮಿತವಾಗಿರುವ ಈ ಮಾರುಕಟ್ಟೆಯನ್ನು ನವೀಕರಣಗೊಳಿಸಿ ವ್ಯಾಪಾರಸ್ಥರಿಗೆ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦ 85 – 400 ಪ್ರತಿಗಳು/04–12–2020